**All India Radio: Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**10.05.2026 / 6.40 p.m.**
***************

ಮುಖ್ಯಾಂಶಗಳು

೧. ವಿಕಸಿತ ಭಾರತ ಸಂಕಲ್ಪ ಸಾಕಾರಕ್ಕೆ ಕರ್ನಾಟಕದ ಅಭಿವೃದ್ಧಿ ಅತ್ಯಂತ ಮಹತ್ವದ್ದು- ಪ್ರಧಾನಿ ನರೇಂದ್ರ ಮೋದಿ

೨. ಸಚಿವ ಡಿ.ಸುಧಾಕರ್ ನಿಧನ ; ನಾಳೆ ಚಳ್ಳಕೆರೆಯಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ

೩. ಬೆಂಗಳೂರು-ಬೀದರ್, ಬೆಂಗಳೂರು-ಕಲಬುರಗಿ ಸಾಪ್ತಾಹಿಕ ವಿಶೇಷ ಎಕ್ಸ್‌ಪ್ರೆಸ್ ರೈಲಿನ ಪ್ರತಿದಿನದ ಸಂಚಾರಕ್ಕೆ ಅನುಮೋದನೆ

೪. ರಾಜ್ಯದ ಕೆಲವೆಡೆ ಮಳೆ ; ಗರಿಷ್ಠ ಉಷ್ಣಾಂಶದಲ್ಲಿ ಬದಲಾವಣೆಯಿಲ್ಲ - ಹವಾಮಾನ ಇಲಾಖೆ ಮುನ್ಸೂಚನೆ

---

ವಿಕಸಿತ ಭಾರತದ ಸಂಕಲ್ಪ ಸಾಕಾರಕ್ಕೆ ರಾಜ್ಯದ ಅಭಿವೃದ್ಧಿ ಅತ್ಯಂತ ಮಹತ್ವದ್ದು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿ, ವಿಧಾನಸಭಾ ಚುನಾವಣೆಯ ಗೆಲುವಿನ ಬಳಿಕ ಬೆಂಗಳೂರಿಗೆ ಇಂದು ಆಗಮಿಸಿದ್ದ ಪ್ರಧಾನಿ ವಿಮಾನ ನಿಲ್ದಾಣದ ಬಳಿ ಪಕ್ಷದ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದರು.

ಸುಗಮ ಜೀವನ ಹಾಗೂ ಸುಲಲಿತ ವ್ಯವಹಾರಕ್ಕೆ ಅಗತ್ಯವಾದ ಮೂಲಸೌಕರ್ಯ, ಹೂಡಿಕೆ, ಉದ್ಯೋಗ ಮತ್ತು ಅಭಿವೃದ್ಧಿಗೆ ಬಿಜೆಪಿ-ಎನ್‌ಡಿಎ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು.

ರಾಜ್ಯದ ಪ್ರತಿಯೊಂದು ಕುಟುಂಬದ ಕನಸು ನನಸಾಗಿಸಲು, ರಾಜ್ಯವನ್ನು ಅಭಿವೃದ್ಧಿಯ ಮುಂಚೂಣಿಗೆ ತರಲು ಕೇಂದ್ರ ಸರ್ಕಾರ ನಿರಂತರವಾಗಿ ಕೆಲಸ ಮಾಡುತ್ತಿದೆ ಎಂದರು.

ಬಳಿಕ, ಆರ್ಟ್ ಆಫ್ ಲಿವಿಂಗ್‌ನ ೪೫ನೇ ವರ್ಷದ ವಾರ್ಷಿಕೋತ್ಸವದಲ್ಲಿ ಭಾಗವಹಿಸಿ, ಆರ್ಟ್ ಆಫ್ ಲಿವಿಂಗ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ನೂತನವಾಗಿ ನಿರ್ಮಿಸಲಾದ ಧ್ಯಾನ ಮಂದಿರವನ್ನು

ಉದ್ಘಾಟಿಸಿ ಮಾತನಾಡಿದ ಪ್ರಧಾನಿ, ಒಂಬತ್ತು ರಾಷ್ಟ್ರೀಯ ಕಲ್ಯಾಣ ಗುರಿಗಳ ಸಾಧನೆಗಾಗಿ ಆರ್ಟ್ ಆಫ್ ಲಿವಿಂಗ್‌ನಂತಹ ಧಾರ್ಮಿಕ ಕೇಂದ್ರಗಳ ಬೆಂಬಲವನ್ನು ಬಯಸಿದರು.

ಯೋಗ, ಧ್ಯಾನ, ಪ್ರಾಣಯಾಮ ನಮ್ಮ ಪಾರಂಪರಿಕ, ಆಧ್ಯಾತ್ಮಿಕತೆಯ ಭಾಗವಾಗಿದ್ದು, ನಮ್ಮ ದೇಶದ ಪ್ರಗತಿಯಲ್ಲಿ ಯುವಜನತೆ ಪಾತ್ರವನ್ನು ರೂಪಿಸುವಲ್ಲಿ ಮಹತ್ವದ್ದಾಗಿವೆ. ಸ್ವಚ್ಛತಾ ಅಭಿಯಾನ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಾಮಾಜಿಕ ಅರಿವು ಮೂಡಿಸುವಲ್ಲಿ ನೆರವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

---

ರಾಜ್ಯದ ಯೋಜನೆ ಮತ್ತು ಸಾಂಖಿಕ ಇಲಾಖೆ ಸಚಿವ ಡಿ. ಸುಧಾಕರ್ ಅವರು ಇಂದು ನಿಧನರಾಗಿದ್ದಾರೆ.

ಕಳೆದ ಕೆಲ ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಸಚಿವ ಡಿ. ಸುಧಾಕರ್ ಅವರು ಬೆಂಗಳೂರಿನ ಕಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಆದರೆ ಚಿಕಿತ್ಸೆ ಫಲಿಸದೆ ಇಂದು ನಿಧನರಾಗಿದ್ದಾರೆ.

ಸಚಿವ ಡಿ. ಸುಧಾಕರ್ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಕಾನೂನು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಸೇರಿದಂತೆ ಹಲವು ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ.

---

ಯೋಜನೆ ಮತ್ತು ಸಾಂಖ್ಯಿಕ ಸಚಿವ ಡಿ.ಸುಧಾಕರ್ ನಿಧನದ ಹಿನ್ನೆಲೆಯಲ್ಲಿ ನಾಳೆ ಚಿತ್ರದುರ್ಗ ಜಿಲ್ಲೆಯ ಸರ್ಕಾರಿ ಕಚೇರಿಗಳು ಹಾಗೂ ಎಲ್ಲಾ ಶಾಲಾ ಕಾಲೇಜುಗಳಿಗೆ ಸಾರ್ವಜನಿಕ ರಜೆ ಘೋಷಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಸರ್ಕಾರದಿಂದ ಅನುದಾನ ಪಡೆಯುವ ಎಲ್ಲಾ ವಿದ್ಯಾಸಂಸ್ಥೆಗಳು ಮತ್ತು ಸರ್ಕಾರಿ ಸ್ವಾಮ್ಯದ ಅಂಗಸಂಸ್ಥೆಗಳಿಗೂ ರಜೆ ಘೋಷಿಸಲಾಗಿದ್ದು, ಇಂದಿನಿಂದ ಮೂರು ದಿನ ರಾಜ್ಯಾದ್ಯಂತ ಶೋಕಾಚರಣೆಗೆ ಆದೇಶಿಸಲಾಗಿದೆ.

ಈ ಅವಧಿಯಲ್ಲಿ ಯಾವುದೇ ಸಾರ್ವಜನಿಕ ಮನರಂಜನಾ ಕಾರ್ಯಕ್ರಮಗಳು ಇರುವುದಿಲ್ಲ. ಸರ್ಕಾರಿ ಕಟ್ಟಡಗಳ ಮೇಲೆ ರಾಷ್ಟ್ರಧ್ವಜವನ್ನು ಅರ್ಧಮಟ್ಟದಲ್ಲಿ ಹಾರಿಸಲಾಗುವುದು. ಮೃತರ ಗೌರವಾರ್ಥ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನೆರವೇರಿಸಲು ಸರ್ಕಾರ ಘೋಷಿಸಿದೆ.

---

ಕಾಸರಗೋಡು ಕ್ಷೇತ್ರದಿಂದ ಮುಸ್ಲಿಂಲೀಗ್ ಪಕ್ಷದ ಅಭ್ಯರ್ಥಿಯಾಗಿ ಕೇರಳಂ ವಿಧಾನಸಭೆಗೆ ಆಯ್ಕೆಯಾಗಿರುವ ಮಾಹಿನ್ ಕಲ್ಲತ್ರ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ತಮ್ಮ ನಿವಾಸದಲ್ಲಿ ಭೇಟಿಯಾಗಿ ಅಭಿನಂದಿಸಿದರು.

ಚುನಾವಣೆ ವೇಳೆ ಸಿದ್ದರಾಮಯ್ಯ ಅವರು, ಮಾಹಿನ್ ಪರ ಪ್ರಚಾರ ನಡೆಸಿದ್ದರು. ಈ ಹಿನ್ನೆಲೆಯಲ್ಲಿ ಇಂದು ಮುಖ್ಯಮಂತ್ರಿಯವರನ್ನು ಭೇಟಿಯಾಗಿ ಧನ್ಯವಾದ ತಿಳಿಸಿದರು.

ಈ ವೇಳೆ ಕೆ.ಕೆ.ಆರ್.ಡಿ.ಬಿ. ಅಧ್ಯಕ್ಷ ಶಾಸಕ ಅಜಯ್ ಸಿಂಗ್ ಮತ್ತಿತರರು ಉಪಸ್ಥಿತರಿದ್ದರು.

---

ಭಾರತೀಯ ಅರಣ್ಯ ಸೇವೆ-ಐಎಫ್ಎಸ್ ಪರೀಕ್ಷೆಯಲ್ಲಿ ೬೩ನೇ ರ್‍ಯಾಂಕ್ ಪಡೆದ ಕನಕಪುರ ತಾಲೂಕಿನ ಸಾಸಲಾಪುರ ಗ್ರಾಮದ ಅನುಷಾ ಶ್ರೀನಿವಾಸ್ ಅವರನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಭಿನಂದಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಅವರು, ಅನುಷಾ ಶ್ರೀನಿವಾಸ್ ಅವರ ಸಾಧನೆ ಹುಟ್ಟೂರಿಗೆ, ಪೋಷಕರಿಗೆ ಹಾಗೂ ನಮ್ಮ ತಾಲೂಕಿನವರಿಗೆ ಹೆಮ್ಮೆಯ ವಿಷಯವಾಗಿದೆ. ಅವರ ಪರಿಶ್ರಮ, ಪ್ರಯತ್ನಕ್ಕೆ ಪ್ರತಿಫಲ ಸಿಕ್ಕಿದ್ದು, ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಮಾದರಿಯಾಗಿದ್ದಾರೆ ಎಂದು ಶ್ಲಾಘಿಸಿದ್ದಾರೆ.

ಮುಂದಿನ ದಿನಗಳಲ್ಲಿ ಭಾರತೀಯ ಅರಣ್ಯ ಸೇವೆಯಲ್ಲಿ ಉತ್ತಮ ಸೇವೆ ಸಲ್ಲಿಸಿ ರಾಜ್ಯ ಹಾಗೂ ದೇಶಕ್ಕೆ ಕೀರ್ತಿ ತರುವಂತಾಗಲಿ ಎಂದು ಹಾರೈಸಿದ್ದಾರೆ.

---

ಬೆಂಗಳೂರು-ಬೀದರ್, ಬೆಂಗಳೂರು-ಕಲಬುರಗಿ ನಡುವಿನ ಸಾಪ್ತಾಹಿಕ ವಿಶೇಷ ಎಕ್ಸ್‌ಪ್ರೆಸ್ ರೈಲಿನ ಪ್ರತಿದಿನದ ಸಂಚಾರಕ್ಕೆ ರೈಲ್ವೆ ಮಂಡಳಿ ಅನುಮೋದನೆ ನೀಡಿದೆ.

ಬೆಂಗಳೂರು-ಬೀದರ್ ನಡುವಿನ ೧೬೫೫೯ ರೈಲು ಮೇ ೧೫ರಿಂದ ಪ್ರತಿ ಶುಕ್ರವಾರ ಮತ್ತು ಭಾನುವಾರ ಸರ್.ಎಂ.ವಿಶ್ವೇಶ್ವರಯ್ಯ ನಿಲ್ದಾಣದಿಂದ ರಾತ್ರಿ ೯.೧೫ಕ್ಕೆ ಹೊರಡಲಿದ್ದು, ಮಾರನೇ ದಿನ ಮಧ್ಯಾಹ್ನ ೧೨.೧೫ಕ್ಕೆ ಬೀದರ್ ತಲುಪಲಿದೆ.

ಬೆಂಗಳೂರು-ಬೀದರ್ ನಡುವಿನ ೧೬೫೬೦ ಸಂಖ್ಯೆಯ ರೈಲು ಇದೇ ೧೬ರಿಂದ ಪ್ರತಿ ಶನಿವಾರ ಮತ್ತು ಸೋಮವಾರ ವಿಶ್ವೇಶ್ವರ ನಿಲ್ದಾಣದಿಂದ ನಿರ್ಗಮಿಸಲಿದೆ.

ಬೆಂಗಳೂರು-ಕಲಬುರಗಿ ನಡುವಿನ ೧೬೫೬೩ ಸಂಖ್ಯೆಯ ರೈಲು ಇದೇ ೧೬ರಿಂದ ಪ್ರತಿ ಶನಿವಾರ ಬೆಂಗಳೂರು ಕಂಟೋನ್ಮೆಂಟ್‌ನಿಂದ ಹೊರಡಲಿದೆ. ೧೬೫೬೪ ಸಂಖ್ಯೆಯ ರೈಲು ಇದೇ ೧೭ರಿಂದ ಕಲಬುರಗಿಯಿಂದ ಹೊರಡಲಿದೆ.

ಈ ವಿಶೇಷ ರೈಲುಗಳು ಯಲಹಂಕ, ಹಿಂದೂಪುರ, ಧರ್ಮಾವರಂ, ಅನಂತಪುರ, ಗುಂಟಕಲ್ಲು, ರಾಯಚೂರು, ಮತ್ತಿತರ ನಿಲ್ದಾಣಗಳಲ್ಲಿ ನಿಲುಗಡೆಯಾಗಲಿದೆ ಎಂದು ರೈಲ್ವೆ ಇಲಾಖೆ ತಿಳಿಸಿದೆ.

———————————

ನಾಡಿನಾದ್ಯಂತ ಇಂದು 'ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ'ಯನ್ನು  ಆಚರಿಸಲಾಯಿತು.

ಶಿವಮೊಗ್ಗ ಜಿಲ್ಲಾಡಳಿತ, ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಶಾಸಕ ಎಸ್.ಎನ್.ಚನ್ನಬಸಪ್ಪ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಭಕ್ತಿ ಮತ್ತು ತಾಳ್ಮೆಯ ಪ್ರತೀಕವಾಗಿದ್ದು ಅವರ ಪರಹಿತ ಚಿಂತನೆ ನಮ್ಮೆಲ್ಲರಿಗೆ ಮಾದರಿಯಾಗಿದೆ ಎಂದರು.

ದಾವಣಗೆರೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಹೇಮರೆಡ್ಡಿ ಮಲ್ಲಮ್ಮನವರ ಭಾವಚಿತ್ರಕ್ಕೆ ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ಪುಷ್ಪಾರ್ಚನೆ ಮಾಡಿದರು.  ಇದಕ್ಕೂ ಮುನ್ನಾ ಸಚಿವ ಡಿ. ಸುಧಾಕರ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಿಸಲಾಯಿತು. ದೊಡ್ಡಬಳ್ಳಾಪುರದ ತಾಲೂಕು ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ಧೀರಜ್ ಮುನಿರಾಜು, ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ತಮ್ಮ ಕಾಯಕದ ಮೂಲಕ ಜನಾನುರಾಗಿಯಾಗಿ, ಮಹಿಳೆಯರಿಗೆ ಆದರ್ಶವಾಗಿದ್ದರು ಎಂದು ಸ್ಮರಿಸಿದರು.

———————————

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪದ ಯರ್ತಿಗಾನಹಳ್ಳಿ ಗ್ರಾಮದಲ್ಲಿ ಹಲವು ದಿನಗಳಿಂದ ಸೂರಿಲ್ಲದೆ ಸರ್ಕಾರಿ ಶಾಲೆ ಹಾಗೂ ತಂಗುದಾಣಗಳಲ್ಲಿ ವಾಸಿಸುತ್ತಿದ್ದ ನಿರಾಶ್ರಿತ ಮಹಿಳೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಕ್ಕ ಪಡೆ ತಂಡ ಮಾನವೀಯ ನೆರವು ನೀಡಿದ್ದು, ಶಾಶ್ವತ ಆಶ್ರಯ ಒದಗಿಸಿದೆ.

ಈ ಕುರಿತು ಸಾರ್ವಜನಿಕರು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ಮಾಹಿತಿ ನೀಡಿದ ಹಿನ್ನೆಲೆಯಲ್ಲಿ, ತಕ್ಷಣವೇ ಅಕ್ಕ ಪಡೆ ವಿಶೇಷ ತಂಡ ರಚಿಸಿ ಗ್ರಾಮಕ್ಕೆ ಭೇಟಿ ನೀಡಿ ಮಹಿಳೆಯನ್ನು

ರಕ್ಷಿಸಿ ಪವಿತ್ರ ಟ್ರಸ್ಟ್ ನಲ್ಲಿ ಸುರಕ್ಷಿತ ಆಶ್ರಯ ಹಾಗೂ ಪುನರ್ವಸತಿ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿ ಜಗದೀಶ.ಎನ್.ಎಂ ತಿಳಿಸಿದ್ದಾರೆ.

———————————

ಚಾಮರಾಜನಗರ ಜಿಲ್ಲೆಯ ಮಲೆಮಹದೇಶ್ವರ ವನ್ಯಜೀವಿ ಧಾಮದಲ್ಲಿ ಚಿರತೆ ದಾಳಿಗೆ ಬಾಲಕ ಸಾವನ್ನಪ್ಪಿರುವುದಾಗಿ ವರದಿಯಾಗಿದೆ. ಮೃತ ಬಾಲಕವನ್ನು ಬೆಂಗಳೂರು ಮೂಲದ ಲಗ್ಗೆರೆ ನಿವಾಸಿ ಎಂದು ಗುರುತಿಸಲಾಗಿದೆ.

ಇಂದು ಬೆಳಗ್ಗೆ ೧೦ಕ್ಕೂ ಹೆಚ್ಚು ಮಂದಿ ನಾಗಮಲೆಗೆ ಕಾಲ್ನಡಿಗೆಯಲ್ಲಿ ತೆರಳುತ್ತಿದ್ದ ವೇಳೆ ಇಂಡಿಗನತ್ತ ಗ್ರಾಮದ ಸಮೀಪ ಬಾಲಕನ ಮೇಲೆ ಚಿರತೆ ದಾಳಿ ನಡೆಸಿದೆ.

ಅರಣ್ಯ ಇಲಾಖೆ ಅಧಿಕಾರಿಗಳು ಮಾಹಿತಿ ಪಡೆದು ಶವವನ್ನು ಪತ್ತೆಹಚ್ಚಿ ಮರಣೋತ್ತರ ಪರೀಕ್ಷೆಗೆ ರವಾನೆ ಮಾಡಿದ್ದಾರೆ.

———————————

ಚಿಕ್ಕಬಳ್ಳಾಪುರದ ಬೀದಿ ಬದಿ ವ್ಯಾಪಾರಿಗಳಿಗಾಗಿ ಕೇಂದ್ರ ಸರ್ಕಾರದ ಆತ್ಮ ನಿರ್ಭರ್ ಯೋಜನೆಯಡಿ ೪ ಸಾವಿರದ ೬೭೩ ಅರ್ಜಿಗಳಿಗೆ ಮಂಜೂರಾತಿ ನೀಡಿದ್ದು, ಈ ಪೈಕಿ ೪ ಸಾವಿರದ ೭೮೨ ಅರ್ಜಿಗಳ ಫಲಾನುಭವಿಗಳಿಗೆ ಬ್ಯಾಂಕುಗಳಿಂದ ಹಣ ಬಿಡುಗಡೆಯಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್ ತಿಳಿಸಿದ್ದಾರೆ.

———————————

ಇನ್ನು ಹವಾವರ್ತಮಾನ,

ರಾಜ್ಯದ ಕರಾವಳಿ ಮತ್ತು ದಕ್ಷಿಣ ಒಳನಾಡಿನ ಕೆಲವಡೆ, ಉತ್ತರ ಒಳನಾಡಿನ ಒಂದೆರಡು ಸ್ಥಳಗಳಲ್ಲಿ ಮಳೆಯಾಗಿದೆ. ಕೊಣನೂರಿನಲ್ಲಿ ೩, ಸುಳ್ಯ,ಎಚ್ ಡಿ ಕೋಟೆ, ಸೋಮವಾರಪೇಟೆ, ಕೆಆರ್‌ಎಸ್‌ನಲ್ಲಿ ತಲಾ ೨ ಸೆಂಟಿ ಮೀಟರ್, ಮಾಣಿ, ಮುಲ್ಕಿ, ಪುತ್ತೂರು, ಗುಂಡ್ಲುಪೇಟೆ, ಹೊನ್ನಕೆರೆ, ಚಿಂತಾಮಣಿ, ಸರಗೂರು, ನಾಗಮಂಗಲ, ಕಳಸ, ಚಾಮರಾಜನಗರದಲ್ಲಿ ತಲಾ ಒಂದು ಸೆಂಟಿಮೀಟರ್ ಮಳೆಯಾಗಿದೆ.

ಕಲಬುರಗಿಯಲ್ಲಿ ಗರಿಷ್ಠ ೩೯.೪ ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿತ್ತು.

ಮುಂದಿನ ೫ ದಿನ ರಾಜ್ಯದಲ್ಲಿ ಗರಿಷ್ಠ ಉಷ್ಣಾಂಶದಲ್ಲಿ ಗಮನಾರ್ಹ ಬದಲಾವಣೆಯಿಲ್ಲ.

ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಹಾಗೂ ಸುತ್ತಮುತ್ತ ಭಾಗಶಃ ಮೋಡ ಕವಿದ ವಾತಾವರಣ. ಗರಿಷ್ಠ ೩೩, ಕನಿಷ್ಠ ೨೨ ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗುವ ಸಾಧ್ಯತೆಯಿದೆ.

________ಮುಕ್ತಾಯ________